**All India Radio: Bangalore**
**National Bulletin In Kannada**
**21.08.2026 19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<>><><*><><<>**

ಮುಖ್ಯಾಂಶಗಳು

೧. ಬಾಹ್ಯಾಕಾಶ ನವೋದ್ಯಮಗಳ ಸಿಇಒ, ಸ್ಥಾಪಕರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಸಂವಾದ

೨. ಭಾರತದ ಅಧ್ಯಕ್ಷತೆಯಲ್ಲಿ ವಿಶಾಖಪಟ್ಟಣದಲ್ಲಿ ನಾಳೆ ಬ್ರಿಕ್ಸ್ ಯುವ ಸಚಿವರ ಸಭೆ

೩. ದಕ್ಷಿಣ ಭಾರತದ ಖ್ಯಾತ ಹಿರಿಯ ನಟಿ ಸಾಹುಕಾರ್ ಜಾನಕಿ ನಿಧನ; ಗಣ್ಯರ ಸಂತಾಪ

೪. ಇಪ್ಪತ್ತು ವರ್ಷದೊಳಗಿನವರ ವಿಶ್ವ ಕುಸ್ತಿ ಚಾಂಪಿಯನ್‌ಶಿಪ್; ಚಿನ್ನದ ಪದಕ ಗೆದ್ದ ಭಾರತದ ಕಾಜಲ್ ಧೋಚಕ್

೫. ಬಿಡಬ್ಲ್ಯುಎಫ್ ಬ್ಯಾಡ್ಮಿಂಟನ್ ವಿಶ್ವ ಚಾಂಪಿಯನ್‌ಶಿಪ್; ಮಹಿಳಾ ಡಬಲ್ಸ್ ವಿಭಾಗದ ಸೆಮಿಫೈನಲ್‌ಗೆ ತ್ರೀಸಾ ಜಾಲಿ -ಗಾಯತ್ರಿ ಗೋಪಿಚಂದ್ ಲಗ್ಗೆ

**<>><><*><><<>**

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ನವದೆಹಲಿಯಲ್ಲಿ ಬಾಹ್ಯಾಕಾಶ ನವೋದ್ಯಮಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಸ್ಥಾಪಕರೊಂದಿಗೆ ಸಂವಾದ ನಡೆಸಿದರು. ಈ ವೇಳೆ ಮಾತನಾಡಿದ ಪ್ರಧಾನಿ, ದೇಶದ ಬಾಹ್ಯಾಕಾಶ ವಲಯವು ಜಾಗತಿಕ ಪ್ರತಿಭೆ, ಕಂಪನಿಗಳು ಮತ್ತು ಹೂಡಿಕೆಗೆ ಆಯಸ್ಕಾಂತವಾಗಬಹುದು. ಜಗತ್ತು ಬಾಹ್ಯಾಕಾಶದ ಬಗ್ಗೆ ಯೋಚಿಸಿದಾಗ ಅದು ಭಾರತದ ಕಡೆಗೆ ನೋಡುವಂತಹ ವಾತಾವರಣವನ್ನು ಸೃಷ್ಟಿಸುವಂತೆ ಸಲಹೆ ನೀಡಿದರು. ಕೃಷಿ, ಜಾನುವಾರು ನಿರ್ವಹಣೆ, ಡೇರಿ, ಪರಿಸರ ಸೇರಿದಂತೆ ಹಲವು ಕ್ಷೇತ್ರಗಳಿಗೆ ಬಾಹ್ಯಾಕಾಶ ತಂತ್ರಜ್ಞಾನವು ಹೇಗೆ ಅಪಾರ ಕೊಡುಗೆ ನೀಡಬಹುದು ಎಂಬುದರ ಕುರಿತು ಯೋಚಿಸುವಂತೆ ಅವರು ಸ್ಟಾರ್ಟ್‌ಅಪ್‌ಗಳ ಸ್ಥಾಪಕರಿಗೆ ಕರೆ ನೀಡಿದರು. ಬಾಹ್ಯಾಕಾಶ ಕ್ಷೇತ್ರದಲ್ಲಿ ಭಾರತವು ಜಗತ್ತಿಗೆ ಬಲವಾದ, ನವೀನ ಮತ್ತು ವಾಣಿಜ್ಯಿಕವಾಗಿ ಕಾರ್ಯಸಾಧ್ಯವಾದ ಮಾದರಿಯನ್ನು ನೀಡಬಲ್ಲದು ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು. ಸಭೆಯಲ್ಲಿ ಸ್ಕೈರೂಟ್ ಏರೋಸ್ಪೇಸ್, ಅಗ್ನಿಕುಲ್ ಕಾಸ್ಮೋಸ್, ಪಿಕ್ಸೆಲ್, ಧ್ರುವ ಸ್ಪೇಸ್, ಗ್ಯಾಲಕ್ಸ್ ಐ, ಪಿಯರ್‌ಸೈಟ್, ಬೆಲ್ಲಾಟ್ರಿಕ್ಸ್ ಏರೋಸ್ಪೇಸ್ ಮತ್ತು ದಿಗಂತರಾ ಸೇರಿದಂತೆ ಬಾಹ್ಯಾಕಾಶ ವಲಯದಲ್ಲಿ ಕೆಲಸ ಮಾಡುತ್ತಿರುವ ಇಪ್ಪತ್ತು ಸ್ಟಾರ್ಟ್‌ಅಪ್‌ಗಳ ಸ್ಥಾಪಕರು ಭಾಗವಹಿಸಿದ್ದರು.

**<>><><*><><<>**

ಭಾರತ ಮತ್ತು ಬ್ರೆಜಿಲ್ ನಡುವೆ ದೂರಸಂಪರ್ಕ ಹಾಗೂ ಮಾಹಿತಿ ಮತ್ತು ಸಂವಹನ ತಂತ್ರಜ್ಞಾನ ಕ್ಷೇತ್ರಗಳಲ್ಲಿ ಸಹಕಾರ ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ತಿಳಿವಳಿಕೆ ಒಪ್ಪಂದಕ್ಕೆ ಸಹಿ ಹಾಕಲಾಗಿದೆ. ಬ್ರಿಕ್ಸ್ ಮಾಹಿತಿ ಮತ್ತು ಸಂವಹನ ತಂತ್ರಜ್ಞಾನ ಸಭೆಯ ಸಂದರ್ಭದಲ್ಲಿ ಈ ಒಪ್ಪಂದಕ್ಕೆ

ಸಹಿ ಹಾಕಲಾಗಿದೆ ಎಂದು ದೂರಸಂಪರ್ಕ ಇಲಾಖೆ ತಿಳಿಸಿದೆ. ಈ ಒಪ್ಪಂದವು ಡಿಜಿಟಲ್ ನಾವೀನ್ಯತೆಗೆ ಉತ್ತೇಜನ ನೀಡುವುದರ ಜೊತೆಗೆ, ಡಿಜಿಟಲ್ ಮೂಲಸೌಕರ್ಯ ಬಲಪಡಿಸಿ, ಉದಯೋನ್ಮುಖ ತಂತ್ರಜ್ಞಾನಗಳಲ್ಲಿ ಸಹಕಾರಕ್ಕೆ ಉತ್ತೇಜನ ನೀಡಲಿದೆ. ಪುಣೆಯಲ್ಲಿ ನಡೆದ ೧೨ನೇ ಬ್ರಿಕ್ಸ್ ಸಂವಹನ ಸಚಿವರ ಸಭೆಯ ಸಂದರ್ಭದಲ್ಲಿ ಕೇಂದ್ರ ಸಂವಹನ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಹಾಗೂ ಬ್ರೆಜಿಲ್‌ನ ಸಂವಹನ ಸಚಿವ ಫ್ರೆಡೆರಿಕೊ ಡಿ ಸಿಕ್ವೇರಾ ಫಿಲ್ಹೊ ಅವರು ತಿಳಿವಳಿಕೆ ಒಪ್ಪಂದಕ್ಕೆ ಸಹಿ ಹಾಕಿದರು. ಈ ತಿಳಿವಳಿಕೆ ಒಪ್ಪಂದವು ಸಾರ್ವತ್ರಿಕ ಸಂಪರ್ಕ ವ್ಯವಸ್ಥೆ, ಸೈಬರ್ ಭದ್ರತೆ, ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ, ಉದಯೋನ್ಮುಖ ತಂತ್ರಜ್ಞಾನ, ಸಾಮರ್ಥ್ಯ ವರ್ಧನೆ ಹಾಗೂ ಉತ್ತಮ ಕಾರ್ಯವಿಧಾನಗಳ ವಿನಿಮಯ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಹಕಾರವನ್ನು ಮತ್ತಷ್ಟು ಗಾಢಗೊಳಿಸಲಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ತಿಳಿಸಿದ್ದಾರೆ. ಸುರಕ್ಷಿತ ಹಾಗೂ ಎಲ್ಲರನ್ನೂ ಒಳಗೊಂಡ ಡಿಜಿಟಲ್ ಭವಿಷ್ಯ ನಿರ್ಮಾಣಕ್ಕೆ ಭಾರತ-ಬ್ರೆಜಿಲ್ ಸಹಕಾರವನ್ನು ಬಲಪಡಿಸುವ ನಿಟ್ಟಿನಲ್ಲಿ ಈ ಒಪ್ಪಂದ ಮಹತ್ವದ ಹೆಜ್ಜೆಯಾಗಿದೆ ಎಂದು ಅವರು ಹೇಳಿದ್ದಾರೆ.

<>><><*><><<>

ಭಾರತದ ಅಧ್ಯಕ್ಷತೆಯಲ್ಲಿ ಆಂಧ್ರಪ್ರದೇಶದ ವಿಶಾಖಪಟ್ಟಣದಲ್ಲಿ ಬ್ರಿಕ್ಸ್ ಯುವ ಸಚಿವರ ಸಭೆ ಮತ್ತು ಬ್ರಿಕ್ಸ್ ಕ್ರೀಡಾ ಸಚಿವರ ಸಭೆ ನಡೆಯಲಿದೆ. ಬ್ರಿಕ್ಸ್ ಯುವ ಸಚಿವರ ಸಭೆ ನಾಳೆ ನಡೆಯಲಿದ್ದು, ಬ್ರಿಕ್ಸ್ ಕ್ರೀಡಾ ಸಚಿವರ ಸಭೆ ನಾಡಿದ್ದು ನಡೆಯಲಿದೆ. ಕೇಂದ್ರ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವ ಡಾ.ಮನ್ಸುಖ್ ಮಾಂಡವಿಯಾ ಅಧ್ಯಕ್ಷತೆಯಲ್ಲಿ ಸಭೆ ನಡೆಯಲಿದ್ದು, ಕೇಂದ್ರ ಯುವ ವ್ಯವಹಾರ ಮತ್ತು ಕ್ರೀಡಾ ಖಾತೆ ರಾಜ್ಯ ಸಚಿವೆ ರಕ್ಷಾ ಖಡ್ಸೆ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಬ್ರಿಕ್ಸ್ ಯುವ ಸಚಿವರ ಸಭೆಯು, ಯುವ ಅಭಿವೃದ್ಧಿ ಮತ್ತು ಸಬಲೀಕರಣದಲ್ಲಿ ಸಹಕಾರವನ್ನು ಬಲಪಡಿಸುವತ್ತ ಗಮನಹರಿಸಲಿದ್ದು, ಶಿಕ್ಷಣ, ಕೌಶಲ್ಯ, ಉದ್ಯಮಶೀಲತೆ, ಯೋಗಕ್ಷೇಮ ಮತ್ತು ಸುಸ್ಥಿರ ಅಭಿವೃದ್ಧಿಯನ್ನು ಒಳಗೊಂಡ ಚರ್ಚೆಗಳು ನಡೆಯಲಿದೆ. ಬ್ರಿಕ್ಸ್ ಕ್ರೀಡಾ ಸಚಿವರ ಸಭೆಯು ಬ್ರಿಕ್ಸ್ ಸದಸ್ಯ ರಾಷ್ಟ್ರಗಳ ಕ್ರೀಡಾ ಸಚಿವರು ಮತ್ತು ನಿಯೋಗದ ಮುಖ್ಯಸ್ಥರನ್ನು ಒಟ್ಟುಗೂಡಿಸಲಿದೆ. ಕ್ರೀಡೆಯಲ್ಲಿ ಸಹಕಾರವನ್ನು ಬಲಪಡಿಸುವ ಬ್ರಿಕ್ಸ್ ಸದಸ್ಯ ರಾಷ್ಟ್ರಗಳ ಬದ್ಧತೆಯನ್ನು ಇದು ಪುನರುಚ್ಚರಿಸುತ್ತದೆ ಎಂದು ಕೇಂದ್ರ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವಾಲಯ ತಿಳಿಸಿದೆ.

<>><><*><><<>

ನವದೆಹಲಿಯಲ್ಲಿಂದು ಮೊಬೈಲ್ ಫೋನ್ ತಯಾರಿಕಾ ಯೋಜನೆಗೆ ಕೇಂದ್ರ ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಚಾಲನೆ ನೀಡಿದರು. ಕೇಂದ್ರ ಸಚಿವ ಸಂಪುಟವು ಕಳೆದ ತಿಂಗಳು ೬೨ ಸಾವಿರದ ೫೦೦ ಕೋಟಿ ರೂಪಾಯಿ ವೆಚ್ಚದೊಂದಿಗೆ ಈ ಯೋಜನೆಗೆ ಅನುಮೋದನೆ ನೀಡಿತ್ತು. ಈ ಕುರಿತು ಸುದ್ದಿಗಾರರಿಗೆ ಮಾಹಿತಿ ನೀಡಿರುವ ಸಚಿವ ಅಶ್ವಿನಿ ವೈಷ್ಣವ್, ಈ ಯೋಜನೆಯು ೨೦೨೬ರ ಏಪ್ರಿಲ್ ೧ರಿಂದ ಜಾರಿಗೆ ಬಂದಿದ್ದು, ೨೦೨೬-೨೭ರಿಂದ ೨೦೩೦-೩೧ರವರೆಗೆ ಐದು ವರ್ಷಗಳ ಅವಧಿವರೆಗೆ ಜಾರಿಯಲ್ಲಿರಲಿದೆ ಎಂದು ತಿಳಿಸಿದರು. ದೇಶದಲ್ಲಿ ಮೊಬೈಲ್ ತಯಾರಿಕೆಯ ಪ್ರಮಾಣವನ್ನು ಮತ್ತಷ್ಟು ಹೆಚ್ಚಿಸುವುದು, ಮೊಬೈಲ್ ಉತ್ಪಾದನಾ ಪೂರೈಕೆ ಸರಪಳಿಯನ್ನು ಬಲಪಡಿಸುವುದು ಹಾಗೂ ದೇಶೀಯ ಉತ್ಪಾದನಾ ಸಾಮರ್ಥ್ಯವನ್ನು ವೃದ್ಧಿಸುವ ಮೂಲಕ ಜಾಗತಿಕ ಸ್ಪರ್ಧಾತ್ಮಕತೆಯನ್ನು ಹೆಚ್ಚಿಸುವುದು ಯೋಜನೆಯ ಉದ್ದೇಶವಾಗಿದೆ.

<>><><*><><<>

ಪರಿಷ್ಕೃತ ನಿಯಮಗಳಡಿ ದೇಶದಲ್ಲಿ ನಿನ್ನೆಯವರೆಗೆ ಒಟ್ಟು ೨೯ ವಿದೇಶಿ ನೇರ ಹೂಡಿಕೆಗಳು ವರದಿಯಾಗಿವೆ. ಇದರಲ್ಲಿ ನಾಲ್ಕು ಸಾವಿರದ ಎಂಟುನೂರು ಕೋಟಿ ರೂಪಾಯಿಗಳಿಗೂ ಹೆಚ್ಚಿನ ಪ್ರಸ್ತಾವಿತ ಎಫ್‌ಡಿಐ ಸೇರಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ಈ ಹೂಡಿಕೆಗಳು ಮಾಹಿತಿ ತಂತ್ರಜ್ಞಾನ, ಕೃತಕ ಬುದ್ಧಿಮತ್ತೆ, ಮಾಹಿತಿ ಮತ್ತು ಸಂವಹನ, ಉತ್ಪಾದನೆ, ಔಷಧಗಳು, ದತ್ತಾಂಶ ಕೇಂದ್ರಗಳು ಮತ್ತು ಸಾರಿಗೆ ಸೇವೆಗಳು ಸೇರಿದಂತೆ ವಿವಿಧ ಕ್ಷೇತ್ರಗಳನ್ನು ಒಳಗೊಂಡಿವೆ. ಮೇ ೧ ರಂದು ವಿದೇಶಿ ವಿನಿಮಯ ನಿರ್ವಹಣೆ ತಿದ್ದುಪಡಿ ನಿಯಮಗಳ ಅಡಿಯಲ್ಲಿ, ೧೦ ಪ್ರತಿಶತದವರೆಗಿನ ಭೂ ಗಡಿ ರಾಷ್ಟ್ರಗಳ ಮಾಲೀಕತ್ವವನ್ನು ನಿಯಂತ್ರಿಸದ ಪ್ರಕರಣಗಳಲ್ಲಿ ಸರ್ಕಾರದ ಪೂರ್ವಾನುಮೋದನೆಯ ಅಗತ್ಯವನ್ನು ತೆಗೆದುಹಾಕುವ ಮೂಲಕ ಭಾರತಕ್ಕೆ ವಿದೇಶಿ ಹೂಡಿಕೆಯ ಹರಿವನ್ನು ಸುಗಮಗೊಳಿಸುತ್ತದೆ ಮತ್ತು ವೇಗಗೊಳಿಸುತ್ತದೆ.

**<>><><*><><<>**

ದಕ್ಷಿಣ ಭಾರತದ ಖ್ಯಾತ ಹಿರಿಯ ನಟಿ ಸಾಹುಕಾರ್ ಜಾನಕಿ ಇಂದು ವಯೋಸಹಜ ಕಾಯಿಲೆಯಿಂದ ನಿಧನರಾಗಿದ್ದಾರೆ. ಅವರಿಗೆ ೯೪ ವರ್ಷ ವಯಸ್ಸಾಗಿತ್ತು. ಅವರ ನಿಧನಕ್ಕೆ ಚಿತ್ರರಂಗ ಸೇರಿದಂತೆ ಅನೇಕ ಗಣ್ಯರು ಸಂತಾಪ ಸೂಚಿಸಿದ್ದಾರೆ. ೧೯೩೧ರ ಡಿಸೆಂಬರ್ ೧೨ರಂದು ಆಂಧ್ರಪ್ರದೇಶದ ರಾಜಮಂಡ್ರಿಯಲ್ಲಿ ಜನಿಸಿದ ಅವರು, ೧೯೫೦ರಲ್ಲಿ ತೆಲುಗಿನ 'ಸಾಹುಕಾರ್' ಚಿತ್ರದ ಮೂಲಕ ಚಿತ್ರರಂಗ ಪ್ರವೇಶಿಸಿದರು. ಈ ಚಿತ್ರದ ಹೆಸರಿನಿಂದಲೇ ಅವರು ಸಾಹುಕಾರ್ ಜಾನಕಿ ಎಂದು ಪ್ರಸಿದ್ಧರಾದರು. ಕನ್ನಡ, ತೆಲುಗು, ತಮಿಳು, ಹಾಗೂ ಮಲಯಾಳಂ ಸೇರಿದಂತೆ ಹಲವು ಭಾಷೆಗಳಲ್ಲಿ ಅವರು ಸುಮಾರು ೪೦೦ ಚಿತ್ರಗಳಲ್ಲಿ ಅಭಿನಯಿಸಿದ್ದಾರೆ. ನಾಯಕಿಯಾಗಿ ಮಾತ್ರವಲ್ಲದೆ, ಪೋಷಕ ಪಾತ್ರಗಳಲ್ಲಿಯೂ ತಮ್ಮ ಅಭಿನಯ ಪ್ರತಿಭೆಯನ್ನು ಮೆರೆದಿದ್ದಾರೆ. ಕನ್ನಡದಲ್ಲಿ ವರನಟ ಡಾ.ರಾಜ್‌ಕುಮಾರ್ ಅವರೊಂದಿಗೆ 'ಮಹಿಷಾಸುರ ಮರ್ದಿನಿ' ಸೇರಿದಂತೆ ಹಲವು ಚಿತ್ರಗಳಲ್ಲಿ ನಟಿಸಿದ್ದಾರೆ. ರಂಗಭೂಮಿಯಲ್ಲಿಯೂ ಸಕ್ರಿಯರಾಗಿದ್ದ ಸಾಹುಕಾರ್ ಜಾನಕಿ ಅವರು ಹಲವು ನಾಟಕಗಳಲ್ಲಿ ಅಭಿನಯಿಸಿದ್ದಾರೆ. ತಮ್ಮ ಸುದೀರ್ಘ ಕಲಾ ಸೇವೆಗಾಗಿ ಹಲವು ಪ್ರಶಸ್ತಿ ಮತ್ತು ಗೌರವಗಳಿಗೆ ಪಾತ್ರರಾಗಿರುವ ಅವರು, ೨೦೨೨ರಲ್ಲಿ ಪದ್ಮಶ್ರೀ ಪ್ರಶಸ್ತಿಗೆ ಭಾಜನರಾಗಿದ್ದಾರೆ.

**<>><><*><><<>**

ಭಾರತದ ಕಾಜಲ್ ಧೋಚಕ್ ಸತತ ಎರಡನೇ ಬಾರಿಗೆ ೨೦ ವರ್ಷದೊಳಗಿನವರ ವಿಶ್ವ ಕುಸ್ತಿ ಚಾಂಪಿಯನ್‌ಶಿಪ್ ಪ್ರಶಸ್ತಿ ಗೆದ್ದಿದ್ದಾರೆ. ಮಹಿಳೆಯರ ೭೬ ಕೆಜಿ ವಿಭಾಗದ ಫೈನಲ್‌ನಲ್ಲಿ ಅವರು ಚೀನಾದ ಜಿಂಗ್ರು ಸನ್ ವಿರುದ್ಧ ೭-೦ ಅಂತರದ ಗೆಲುವು ಸಾಧಿಸುವ ಮೂಲಕ ಚಿನ್ನದ ಪದಕ ಗೆದ್ದರು. ೭೨ ಕೆಜಿ ವಿಭಾಗದಲ್ಲಿ, ಭಾರತದ ತನು ಶರ್ಮಾ ಫೈನಲ್‌ನಲ್ಲಿ ಜಪಾನ್‌ನ ಚಿಸಾಟೊ ಯೋಶಿಡಾ ವಿರುದ್ಧ ೩-೫ ಅಂತರದಲ್ಲಿ ಸೋತು ಬೆಳ್ಳಿಗೆ ತೃಪ್ತಿಪಟ್ಟರು. ೬೨ ಕೆಜಿ ವಿಭಾಗದಲ್ಲಿ, ಸವಿತಾ, ಜಪಾನ್‌ನ ಸಕುರಾ ಒನಿಶಿ ವಿರುದ್ಧ ೨-೧೨ ಅಂತರದಲ್ಲಿ ಸೋತ ನಂತರ ಬೆಳ್ಳಿ ಪದಕ ಗೆದ್ದರು. ಭಾರತದ ಮಾನ್ಸಿ ಲಾಥರ್, ೬೮ ಕೆಜಿ ವಿಭಾಗದ ಫೈನಲ್‌ನಲ್ಲಿ ಚೀನಾದ ಚೆನ್ಲಿಂಗ್ ಸಾಂಗ್ ಅವರನ್ನು ಎದುರಿಸಲಿದ್ದಾರೆ. ಇದೇ ವೇಳೆ ೫೯ ಕೆಜಿ ರೆಪಿಚೇಜ್ ಸುತ್ತಿನಲ್ಲಿ, ಕೋಮಲ್, ಸ್ಪೇನ್‌ನ ರೋಸಾ ಮೊಲಿನಾ ರೊಡ್ರಿಗಸ್ ಅವರನ್ನು ಎದುರಿಸಲಿದ್ದಾರೆ.

**<>><><*><><<>**

ಭಾರತದ ತ್ರೀಸಾ ಜಾಲಿ ಮತ್ತು ಗಾಯತ್ರಿ ಗೋಪಿಚಂದ್ ನವದೆಹಲಿಯಲ್ಲಿ ನಡೆದ ಬಿಡಬ್ಲ್ಯೂಎಫ್ ಬ್ಯಾಡ್ಮಿಂಟನ್ ವಿಶ್ವ ಚಾಂಪಿಯನ್‌ಶಿಪ್‌ನ ಮಹಿಳಾ ಡಬಲ್ಸ್ ಸೆಮಿಫೈನಲ್‌ಗೆ ಲಗ್ಗೆ ಇಟ್ಟಿದ್ದಾರೆ.

ಭಾರತೀಯ ಜೋಡಿ, ನಾಲ್ಕನೇ ಶ್ರೇಯಾಂಕದ ಚೀನಾದ ಜಿಯಾ ಯಿ ಫ್ಯಾನ್ ಮತ್ತು ಜಾಂಗ್ ಶು ಕ್ಸಿಯಾನ್ ಅವರನ್ನು ೧೬-೨೧, ೨೧-೧೫, ೨೧-೧೩ ಸೆಟ್‌ಗಳಿಂದ ಪರಾಭವಗೊಳಿಸಿದರು. ಈ ಗೆಲುವಿನೊಂದಿಗೆ, ತ್ರೀಸಾ ಜಾಲಿ ಮತ್ತು ಗಾಯತ್ರಿ ಗೋಪಿಚಂದ್ ಪ್ರತಿಷ್ಠಿತ ಚಾಂಪಿಯನ್‌ಶಿಪ್‌ನಲ್ಲಿ ಭಾರತಕ್ಕೆ ಪದಕವನ್ನು ಖಚಿತಪಡಿಸಿದ್ದಾರೆ. ಕಳೆದ ೧೫ ವರ್ಷಗಳಲ್ಲಿ ವಿಶ್ವ ಚಾಂಪಿಯನ್‌ಶಿಪ್‌ನಲ್ಲಿ ಮಹಿಳಾ ಡಬಲ್ಸ್ ಸ್ಪರ್ಧೆಯಲ್ಲಿ ಇದು ಭಾರತದ ಮೊದಲ ಪದಕವಾಗಿದೆ.

**<>><><*><><<>**

ಪಶ್ಚಿಮ ಬಂಗಾಳದ ಸಿಲಿಗುರಿಯಲ್ಲಿರುವ ಸಶಸ್ತ್ರ ಸೀಮಾ ಬಲದ ಪ್ರಧಾನ ಕಚೇರಿಯಲ್ಲಿ ಹಲವಾರು ಯೋಜನೆಗಳನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಉದ್ಘಾಟಿಸಿದರು ಹಾಗೂ ಶಿಲಾನ್ಯಾಸ ನೆರವೇರಿಸಿದರು. ಸಮಾರಂಭದ ನಂತರ ಸಶಸ್ತ್ರ ಸೀಮಾ ಬಲದ ಸಿಬ್ಬಂದಿ ಉದ್ದೇಶಿಸಿ ಮಾತನಾಡಿದ ಅವರು, ಕೇಂದ್ರದಲ್ಲಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದ, ಗಡಿ ಭದ್ರತೆಯ ಜವಾಬ್ದಾರಿಯುತ ಸಿಬ್ಬಂದಿಯ ಕಲ್ಯಾಣಕ್ಕೆ ಹೆಚ್ಚಿನ ಆದ್ಯತೆ ನೀಡಲಾಗಿದೆ ಎಂದು ಹೇಳಿದರು. ನೇಪಾಳ ಮತ್ತು ಭೂತಾನ್ ನಂತಹ ದೇಶಗಳೊಂದಿಗೆ ಗಡಿಗಳನ್ನು ಕಾಯುವ ಸವಾಲಿನ ಕೆಲಸವನ್ನು ಎಸ್‌ಎಸ್‌ಬಿ ನಿರ್ವಹಿಸುತ್ತಿದೆ. ಇದು ಅತ್ಯಂತ ಕಠಿಣ ಕರ್ತವ್ಯಗಳಲ್ಲಿ ಒಂದಾಗಿದೆ ಎಂದರು.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ ><><<>**